# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ:21-01-2025 ರಂದು ಮಂಗಳವಾರ "ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್ ಸಭಾಂಗಣ" ಇಲ್ಲಿ ನಡೆದ "ಸಿಂಡಿಕೇಟ್ ಅಸಾಮಾನ್ಯ (ಘಟಿಕೋತ್ಸವ) ಸಭೆ"ಯ ನಡಾವಳಿಗಳು.

ಹಾಜರಾದ ಸದಸ್ಯರು:

| | | |
|---|---|---|
| 1. | ಪ್ರೊ. ಶರತ್ ಅನಂತಮೂರ್ತಿ, ಕುಲಪತಿಗಳು | ಅಧ್ಯಕ್ಷರು |
| 2. | ಶ್ರೀ ಎ.ಎಲ್. ಮಂಜುನಾಥ್, ಕೆ.ಎ.ಎಸ್.(ಸೂಪರ್ ಟೈಮ್ ಶ್ರೇಣಿ), ಕುಲಸಚಿವರು | ಸದಸ್ಯ ಕಾರ್ಯದರ್ಶಿಗಳು |
| 3. | ಪ್ರೊ. ಗೋಪಿನಾಥ್, ಎಸ್.ಎಂ., ಕುಲಸಚಿವರು (ಮೌಲ್ಯಮಾಪನ) | ಸದಸ್ಯರು |
| 4. | ಡಾ. ಕೇಶವ, ಹೆಚ್. ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಪ್ರತಿನಿಧಿ | ಸದಸ್ಯರು |
| 5. | ಪ್ರೊ. ಎಸ್.ವಿ. ಕೃಷ್ಣಮೂರ್ತಿ, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ | ಸದಸ್ಯರು |
| 6. | ಶ್ರೀ ಶಾಂತಕುಮಾರ್ ಜಿ.ಎಸ್. | ಸದಸ್ಯರು |
| 7. | ಶ್ರೀ ಶಶಿಧರ್ ಬಿ.ಎನ್. | ಸದಸ್ಯರು |
| 8. | ಡಾ. ಅರುಣಾ ಎ. ಪ್ರಾಂಶುಪಾಲರು | ಸದಸ್ಯರು |
| 9. | ಡಾ. ಕೆ.ಎಲ್. ಅರವಿಂದ. ಪ್ರಾಂಶುಪಾಲರು | ಸದಸ್ಯರು |
| 10. | ಡಾ. ಮಧು ಜಿ. ಪ್ರಾಂಶುಪಾಲರು | ಸದಸ್ಯರು |
| 11. | ಶ್ರೀ ಶಿವಕುಮಾರ್ ಎಂ. | ಸದಸ್ಯರು |
| 12. | ಶ್ರೀ ಲಕ್ಷ್ಮಿಕಾಂತ ಚಿಮನೂರು | ಸದಸ್ಯರು |
| 13. | ಪ್ರೊ. ಸಾಕಮ್ಮ ಬಿ. | ಸದಸ್ಯರು |
| 14. | ಶ್ರೀ ಮುಸಾವೀರ್ ಬಾಷಾ ಎಂ. | ಸದಸ್ಯರು |
| 15. | ಶ್ರೀ. ಕೆ.ಪಿ. ಶ್ರೀಪಾಲ್ | ಸದಸ್ಯರು |
| 16. | ಶ್ರೀ ಹೆಚ್.ಜಿ. ಅರವಿಂದ | ಸದಸ್ಯರು |
| 17. | ಪ್ರೊ. ಜೆ. ನಾರಾಯಣ | ಸದಸ್ಯರು |

ಗೈರುಹಾಜರಾದ ಸದಸ್ಯರು:

| | | |
|---|---|---|
| 1. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 2. | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 3. | ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 4. | ಆಯುಕ್ತರು, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |

**ಪೂರ್ವಾನುಮತಿಯೊಂದಿಗೆ ಗೈರು ಹಾಜರಾದ ಸದಸ್ಯರು:**

ಯಾರು ಇರುವುದಿಲ್ಲ.

**ಪ್ರಸ್ತಾವನೆ:** ಪ್ರಾರಂಭದಲ್ಲಿ ಸಭೆಗೆ ಆಗಮಿಸಿದ ಸದಸ್ಯರುಗಳೆಲ್ಲರಿಗೂ ಮಾನ್ಯ ಕುಲಸಚಿವರು ಆತ್ಮೀಯವಾಗಿ ಸ್ವಾಗತ ಕೋರಿದರು. ಸಿಂಡಿಕೇಟ್‌ಗೆ ನೂತನವಾಗಿ ನೇಮಕಗೊಂಡ ಪ್ರಾಂಶುಪಾಲರುಗಳಾದ ಡಾ. ಕೆ.ಎಲ್. ಅರವಿಂದ ಹಾಗೂ ಡಾ.ಜಿ. ಮಧುರವರನ್ನು ಆತ್ಮೀಯವಾಗಿ ಸ್ವಾಗತಿಸಲಾಯಿತು. ಸಿಂಡಿಕೇಟ್ ಸದಸ್ಯತ್ವದ ಅವಧಿ ಮುಗಿದ ಪ್ರಾಂಶುಪಾಲರುಗಳಾದ ಡಾ.ಸಣ್ಣಹನುಮಪ್ಪ ಹಾಗೂ ಡಾ.ಎಸ್. ಅನಂತ್‌ರವರ ಸೇವೆಯನ್ನು ಸ್ಮರಿಸಿ ಕೃತಜ್ಞತೆ ಸಲ್ಲಿಸಲಾಯಿತು ಹಾಗೂ ಸಿಂಡಿಕೇಟ್ ಸದಸ್ಯರಾಗಿ ವಯೋನಿವೃತ್ತಿ ಹೊಂದಿದ ಡಾ. ವಿಷ್ಣುಮೂರ್ತಿ, ಜಂಟಿ ನಿರ್ದೇಶಕರು ಇವರನ್ನು ಅಭಿನಂದಿಸಲಾಯಿತು. ಮಾನ್ಯ ಕುಲಪತಿಯವರು ವೈಯಕ್ತಿಕ ಕಾರಣನಿಮಿತ್ತ ವಿದೇಶಕ್ಕೆ ತೆರಳಿದ್ದ ಸಂದರ್ಭದಲ್ಲಿ ಪ್ರಭಾರ ಕುಲಪತಿಯಾಗಿ ಸೇವೆ ಸಲ್ಲಿಸಿದ ವಿಜ್ಞಾನ ನಿಕಾಯದ ಡೀನರಾದ ಪ್ರೊ.ಎಸ್.ವಿ. ಕೃಷ್ಣಮೂರ್ತಿರವರನ್ನು ಅಭಿನಂದಿಸಲಾಯಿತು.

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451

ಮಾನ್ಯ ಕುಲಪತಿಯವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಘನತೆವೆತ್ತ ಕುಲಾಧಿಪತಿಗಳ ಅನುಮೋದನೆ ಮೇರೆಗೆ ವಿಶ್ವವಿದ್ಯಾಲಯದ 34ನೇ ವಾರ್ಷಿಕ ಘಟಿಕೋತ್ಸವವನ್ನು ದಿನಾಂಕ:22–01–2025 ರಂದು ಏರ್ಪಡಿಸಲಾಗಿದೆ. ಕುಲಾಧಿಪತಿಗಳಾದ ಶ್ರೀ ಥಾವರ್‌ಚಂದ್ ಗೆಹ್ಲೋಟ್‌ರವರು ಅಗ್ರಾಸನ ವಹಿಸಲಿದ್ದು, ಸನ್ಮಾನ್ಯ ಉನ್ನತ ಶಿಕ್ಷಣ ಸಚಿವರು ಹಾಗೂ ವಿಶ್ವವಿದ್ಯಾಲಯದ ಸಮಕುಲಾಧಿಪತಿಗಳಾದ ಡಾ.ಎಂ.ಸಿ.ಸುಧಾಕರ್‌ರವರು ಉಪಸ್ಥಿತರಿರುವರು. ಹೈದರಾಬಾದ್ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಯವರಾದ ಪ್ರೊ.ರಾಮ್ ರಾಮಸ್ವಾಮಿರವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ಕರ್ನಾಟಕ ಸರ್ಕಾರದ ಮಾಜಿ ಸಚಿವರು ಹಾಗೂ ವಿಧಾನ ಪರಿಷತ್‌ನ ಸಭಾಪತಿಗಳಾಗಿ ಕರ್ತವ್ಯ ನಿರ್ವಹಿಸಿರುವ ಶ್ರೀ ಕಾಗೋಡು ತಿಮ್ಮಪ್ಪ ಮತ್ತು ಅಂತರರಾಷ್ಟ್ರೀಯ ಖ್ಯಾತಿಯ ಯೋಗಪಟುವಾದ ಶ್ರೀ ಡಿ. ನಾಗರಾಜ ರವರಿಗೆ ಗೌರವ ಡಿ.ಲಿಟ್. ಪದವಿಯನ್ನು ಮತ್ತು ಖ್ಯಾತ ಭೌತವಿಜ್ಞಾನಿ ಪ್ರೊ.ಸಿ.ಎಸ್. ಉನ್ನಿಕೃಷ್ಣನ್ ಅವರಿಗೆ ಗೌರವ ಡಿ.ಎಸ್ಸಿ. ಪದವಿಯನ್ನು ಪ್ರಧಾನ ಮಾಡಲಾಗುವುದು. ಘಟಿಕೋತ್ಸವದಲ್ಲಿ ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಪದವಿ ಪಡೆಯುವ ಅಭ್ಯರ್ಥಿಗಳ ಪಟ್ಟಿಯನ್ನು ಅನುಮೋದನೆಗಾಗಿ ಸಿಂಡಿಕೇಟ್‌ನ ಅಸಾಮಾನ್ಯ ಸಭೆಯನ್ನು ಕರೆಯಲಾಗಿದೆ. ಎಲ್ಲಾ ಸದಸ್ಯರುಗಳು ಸಭೆಯನ್ನು ಹಾಗೂ ಘಟಿಕೋತ್ಸವ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿಕೊಡುವಂತೆ ಕೋರಿದರು.

## ಪರೀಕ್ಷಾ ವಿಭಾಗ

**2025–ಸಿಂ–1.01** ವಿಶ್ವವಿದ್ಯಾಲಯದ 34ನೇ ವಾರ್ಷಿಕ ಘಟಿಕೋತ್ಸವದಲ್ಲಿ ವಿವಿಧ ಸ್ನಾತಕ ಮತ್ತು ಸ್ನಾತಕೋತ್ತರ ಹಾಗೂ ಇತರೆ ಪದವಿಗಳಿಗೆ ಅರ್ಹರಾದ ವಿದ್ಯಾರ್ಥಿಗಳ/ಅಭ್ಯರ್ಥಿಗಳ ಪಟ್ಟಿ ಅನುಮೋದನೆ ಕುರಿತು.

**ಚರ್ಚೆ:** ಕುಲಸಚಿವ (ಮೌಲ್ಯಮಾಪನ)ರವರು ಮಾತನಾಡುತ್ತಾ, ವಿಶ್ವವಿದ್ಯಾಲಯದ 34ನೇ ವಾರ್ಷಿಕ ಘಟಿಕೋತ್ಸವದಲ್ಲಿ ಮೂವರು ಗಣ್ಯರಿಗೆ ಗೌರವ ಡಾಕ್ಟರೇಟ್ ನೀಡಲು ಘನತೆವೆತ್ತ ಕುಲಾಧಿಪತಿಗಳು ಅನುಮೋದನೆ ನೀಡಿದ್ದಾರೆ ಎಂಬ ಮಾಹಿತಿ ನೀಡುತ್ತಾ, ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಮಾಹಿತಿಯನ್ನು ಸಭೆಗೆ ವಿವರಿಸಿ, ಪಟ್ಟಿಗೆ ಅನುಮೋದನೆ ನೀಡುವಂತೆ ಕೋರಿದರು.

**ನಿರ್ಣಯ:** ಚರ್ಚೆಯ ನಂತರ 34ನೇ ವಾರ್ಷಿಕ ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಸಭೆಯು ಅನುಮೋದಿಸಿತು.

ಅಂತಿಮವಾಗಿ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದ ನಂತರ ಸಭೆಯ ಕಲಾಪಗಳು ಮುಕ್ತಾಯವಾದವು.

ಕುಲಸಚಿವರು
ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ

ಸಹಿ/–
ಕುಲಪತಿಗಳು